# ಪೌಲನು ಕೊಲೊಸ್ಸೆಯರಿಗೆ ಬರೆದ ಪತ್ರ

## ಮುನ್ನುಡಿ

'ಏಷ್ಯಾ ಮೈನರ್' ಸೀಮೆಯಲ್ಲಿನ ಎಫೆಸ ನಗರಕ್ಕೆ ಪೂರ್ವದಲ್ಲಿ ಕೊಲೊಸ್ಸೆಯೆಂಬ ಪಟ್ಟಣವಿದೆ. ಎಫೆಸವು ಪ್ರಮುಖ ನಗರವಾಗಿ ರೋಮನ್ನರ ಆಳ್ವಿಕೆಗೆ ಒಳಪಟ್ಟಿತ್ತು. ಕೊಲೊಸ್ಸೆಯ ಸಭೆಯನ್ನು ಪೌಲನೇ ಸ್ಥಾಪಿಸದಿದ್ದರೂ, ಅದು ಅವನ ಧರ್ಮಪ್ರಚಾರ ಕ್ಷೇತ್ರದ ಸರಹದ್ದಿನಲ್ಲಿದ್ದುದರಿಂದ, ಅದರ ಪಾಲನೆಯ ಜವಾಬ್ದಾರಿ ತನಗೆ ಸೇರಿದ್ದೆಂದು ಪೌಲನು ಭಾವಿಸಿದ್ದನು. ಎಂತಲೇ, ಎಫೆಸದಿಂದ ಧರ್ಮಪ್ರಚಾರಕರನ್ನು ಕೊಲೊಸ್ಸೆಯ ಸಭೆಗೆ ಕಳುಹಿಸುತ್ತಿದ್ದನು. ಹೀಗಿರಲು, ಕೆಲವು ಸುಳ್ಳು ಬೋಧಕರು ಅಲ್ಲಿ ತಲೆದೋರಿದ್ದಾರೆಂಬ ಸುದ್ದಿ ಪೌಲನ ಕಿವಿಗೆ ಮುಟ್ಟಿತು. ಯಾರಾದರು ದೈವಜ್ಞಾನವನ್ನು ಮತ್ತು ಪೂರ್ಣ ಜೀವೋದ್ಧಾರವನ್ನು ಹೊಂದಬೇಕಾದರೆ, ಅಂಥವರು ಅಗೋಚರ ಶಕ್ತಿಗಳನ್ನೂ ವಾನಮಂಡಲದಲ್ಲಿರುವ ಅಧಿಪತಿಗಳನ್ನೂ ಆರಾಧಿಸಬೇಕು; ಸುನ್ನತಿಯನ್ನು ಮಾಡಿಸಿಕೊಳ್ಳಬೇಕು; ಊಟೋಪಚಾರ, ಸ್ವಾಗತ, ಸತ್ಕಾರ ಮುಂತಾದುವುಗಳ ಬಗ್ಗೆ ಕಟ್ಟುನಿಟ್ಟಾದ ಕ್ರಮವನ್ನು ಅನುಸರಿಸಬೇಕು ಎಂದು ಅವರು ಬೋಧಿಸುತ್ತಿದ್ದರು.

ಪೌಲನು ಈ ಬೋಧನೆಯನ್ನು ಕಟುವಾಗಿ ಖಂಡಿಸಿ, ಕ್ರಿಸ್ತಯೇಸುವಿನ ಶುಭಸಂದೇಶದ ಸಾರಾಂಶವನ್ನು ಎತ್ತಿ ತೋರಿಸುತ್ತಾನೆ. ಸಂಪೂರ್ಣ ಜೀವೋದ್ಧಾರ ಕ್ರಿಸ್ತಯೇಸುವಿನಿಂದಲೇ ಸಾಧ್ಯ. ಶುಭಸಂದೇಶಕ್ಕೆ ವಿರುದ್ಧವಾದ ತತ್ವಗಳು ಹಾಗೂ ಆಚರಣೆಗಳು ಮಾನವನನ್ನು ಪ್ರಭು ಯೇಸುವಿನಿಂದ ದೂರ ಸರಿಸುವುದರಲ್ಲಿ ಸಂದೇಹವಿಲ್ಲ. ಕ್ರಿಸ್ತಯೇಸುವಿನ ಮುಖಾಂತರವೇ ದೇವರು ವಿಶ್ವವನ್ನು ಸೃಷ್ಟಿಸಿದ್ದು, ಅವರ ಮುಖಾಂತರವೇ ದೇವರು ಅದನ್ನು ತಮ್ಮೊಡನೆ ಸಂಧಾನಪಡಿಸಿಕೊಳ್ಳುತ್ತಾರೆ. ಜಗತ್ತು ಉದ್ಧಾರವಾಗಬೇಕಾದರೆ ಕ್ರಿಸ್ತಯೇಸುವಿನಲ್ಲಿ ಅದು ವಿಶ್ವಾಸವನ್ನು ಇಡಬೇಕು. ಅವರೊಂದಿಗೆ ಅನ್ಯೋನ್ಯವಾಗಿ ಬಾಳಬೇಕು. ಇದಲ್ಲದೆ ಬೇರೆ ಮಾರ್ಗವಿಲ್ಲ. ಈ ಗಹನವಾದ ಸತ್ಯ ಭಕ್ತರ ದಿನನಿತ್ಯ ಜೀವನದಲ್ಲಿ ಬೀರಬೇಕಾದ ಪರಿಣಾಮವನ್ನು ಸಹ ಈ ಪತ್ರದಲ್ಲಿ ಲೇಖಕನು ವಿವರಿಸುತ್ತಾನೆ.

ಈ ಪತ್ರವನ್ನು ಕೊಲೊಸ್ಸೆಗೆ ತೆಗೆದುಕೊಂಡುಹೋದ ತುಖಿಕನ ಜೊತೆಯಲ್ಲಿ ದಾಸನಾದ ಒನೇಸಿಮನೂ ಹೋಗಿದ್ದನು. ಈ ಒನೇಸಿಮನ ವಿಷಯವಾಗಿಯೇ ಪೌಲನು ಫಿಲೆಮೋನನಿಗೆ ಒಂದು ಪತ್ರವನ್ನು ಬರೆದಿದ್ದಾನೆ.

### ಪರಿವಿಡಿ

| | | |
|---|---|---|
| ಪೀಠಿಕೆ | – | 1.1 –1.8 |
| ಕ್ರಿಸ್ತಯೇಸುವಿನ ವ್ಯಕ್ತಿತ್ವ ಮತ್ತು ಕಾರ್ಯಕಲಾಪ | – | 1.9 – 2.19 |
| ಕ್ರಿಸ್ತಯೇಸುವಿನಲ್ಲಿ ಹೊಸ ಜೀವನ | – | 2.20 – 4.6 |
| ಸಮಾಪ್ತಿ | – | 4.7 |

### ಪೀಠಿಕೆ

**1** ಕೊಲೊಸ್ಸೆಯಲ್ಲಿರುವ ದೇವಜನರಿಗೆ ಹಾಗೂ ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಟ್ಟಿರುವ ಸಹೋದರರಿಗೆ –
2ದೇವರ ಚಿತ್ತಾನುಸಾರ ಕ್ರಿಸ್ತ ಯೇಸುವಿನ ಪ್ರೇಷಿತನಾದ ಪೌಲನು ಮತ್ತು ಸಹೋದರ ತಿಮೊಥೇಯನು
ಬರೆಯುವ ಪತ್ರ. ನಮ್ಮ ತಂದೆಯಾದ ದೇವರ ಅನುಗ್ರಹವೂ ಶಾಂತಿ ಸಮಾಧಾನವೂ ನಿಮ್ಮಲ್ಲಿರಲಿ!

## ಕೃತಜ್ಞತಾಸ್ತುತಿ

3-4ನೀವು ಪ್ರಭು ಯೇಸುಕ್ರಿಸ್ತರಲ್ಲಿ ಇಟ್ಟಿರುವ ವಿಶ್ವಾಸ ಹಾಗೂ ದೇವಜನರಲ್ಲಿ ನೀವು ಇರಿಸಿರುವ ಪ್ರೀತಿ ಇವುಗಳ ಬಗ್ಗೆ ನಾವು ಕೇಳಿದ್ದೇವೆ. ಇದಕ್ಕಾಗಿ ಪ್ರಭು ಯೇಸುಕ್ರಿಸ್ತರ ತಂದೆಯಾದ ದೇವರಲ್ಲಿ ಪ್ರಾರ್ಥಿಸುವಾಗಲೆಲ್ಲ ನಿಮಗಾಗಿ ಕೃತಜ್ಞತೆಯನ್ನು ಸಲ್ಲಿಸುತ್ತೇವೆ.
5ಸತ್ಯ ವಾಕ್ಯದ, ಅಂದರೆ ಶುಭಸಂದೇಶದ ಮೂಲಕ ನೀವು ಕೇಳಿ ತಿಳಿದಂಥ ಹಾಗೂ ನಿರೀಕ್ಷಿಸುವಂಥ ಸೌಭಾಗ್ಯವನ್ನು ಸ್ವರ್ಗಲೋಕದಲ್ಲಿ ನಿಮಗಾಗಿ ಕಾದಿರಿಸಲಾಗಿದೆ.
6ದೇವಾನುಗ್ರಹದ ಸತ್ಯಾರ್ಥವನ್ನು ನೀವು ತಿಳಿದ ದಿನದಿಂದಲೂ ನಿಮ್ಮಲ್ಲಿ ಶುಭಸಂದೇಶವು ಹೇಗೆ ಫಲಭರಿತವಾಗುತ್ತಿದೆಯೋ ಹಾಗೆ ಈ ಶುಭಸಂದೇಶವು ಜಗತ್ತಿನ ಎಲ್ಲೆಡೆಯೂ ಹಬ್ಬಿಹರಡುತ್ತಲಿದೆ.
7ಈ ಶುಭಸಂದೇಶವನ್ನು ಕ್ರಿಸ್ತಯೇಸುವಿನ ನಂಬಿಕಸ್ಥ ದಾಸನೂ ನಮ್ಮ ಜೊತೆಯ ಸೇವಕನೂ ಆದ ಎಪಫ್ರನಿಂದ ಕಲಿತುಕೊಂಡಿದ್ದೀರಿ.
8ಪವಿತ್ರಾತ್ಮ ಅವರು ನಿಮಗೆ ಅನುಗ್ರಹಿಸಿದ ಪ್ರೀತಿಯ ಬಗ್ಗೆ ನಮಗೆ ತಿಳಿಸಿದವನು ಸಹ ಆತನೇ.

9 ಹೀಗಿರುವುದರಿಂದ ಈ ವಿಷಯವನ್ನು ನಾವು ಕೇಳಿದ ದಿನದಿಂದಲೂ ನಿಮಗಾಗಿ ಸದಾ ಪ್ರಾರ್ಥಿಸುತ್ತಲೇ ಇದ್ದೇವೆ. ನೀವು ಪರಿಪೂರ್ಣ ವಿವೇಕದಿಂದಲೂ ಆಧ್ಯಾತ್ಮಿಕ ಜ್ಞಾನದಿಂದಲೂ ದೇವರ ಚಿತ್ತವನ್ನು ಸಂಪೂರ್ಣವಾಗಿ ಅರಿಯಬೇಕೆಂಬುದೇ ನಮ್ಮ ಕೋರಿಕೆ.
10ಆಗ ಎಲ್ಲ ವಿಷಯಗಳಲ್ಲಿಯೂ ಪ್ರಭುಯೇಸು ಮೆಚ್ಚುವ ರೀತಿಯಲ್ಲಿ ನೀವು ಜೀವಿಸುವಿರಿ. ನಾನಾ ತರಹದ ಸತ್ಕಾರ್ಯಗಳನ್ನು ಕೈಗೊಳ್ಳುವಿರಿ. ಸತ್ಫಲವನ್ನೀಯುವ ದೈವಜ್ಞಾನದಲ್ಲಿ ವೃದ್ಧಿಹೊಂದುವಿರಿ.
11ದೇವರ ಮಹಿಮಾಶಕ್ತಿಯಿಂದ ನೀವು ಬಲಗೊಂಡು ಎಲ್ಲವನ್ನೂ ತಾಳ್ಮೆಯಿಂದಲೂ ಸಮಾಧಾನದಿಂದಲೂ ಸಹಿಸಿಕೊಳ್ಳುವಿರಿ.
12ಪಿತನಿಗೆ ಹರ್ಷದಿಂದ ಕೃತಜ್ಞತಾಸ್ತುತಿ ಸಲ್ಲಿಸುವಿರಿ. ಏಕೆಂದರೆ, ಬೆಳಕಿನಲ್ಲಿರುವ ದೇವಜನರಿಗೆ ಕಾಯ್ದಿರಿಸಿರುವ ಸ್ವಾಸ್ಥ್ಯದಲ್ಲಿ ಪಾಲುಗಾರರಾಗಲು ನಿಮ್ಮನ್ನು ಯೋಗ್ಯರನ್ನಾಗಿ ಅವರು ಮಾಡಿದ್ದಾರೆ.
13ದೇವರು ನಮ್ಮನ್ನು ಅಂಧಕಾರದ ಆಡಳಿತದಿಂದ ಬಿಡುಗಡೆಮಾಡಿ ತಮ್ಮ ಪುತ್ರನ ಸಾಮ್ರಾಜ್ಯಕ್ಕೆ ಸುರಕ್ಷಿತವಾಗಿ ತಂದಿದ್ದಾರೆ.
14ಈ ಪುತ್ರನಲ್ಲಿ ನಮಗೆ ಪಾಪಕ್ಷಮೆ ದೊರಕಿದೆ, ವಿಮೋಚನೆ ಲಭಿಸಿದೆ.

## ಕ್ರಿಸ್ತ ಯೇಸುವಿಗೆ ಸ್ತುತಿಗೀತೆ

15 ಅದೃಶ್ಯ ದೇವನ ಸದೃಶ್ಯರೂಪನು ಕ್ರಿಸ್ತ,
ಸೃಷ್ಟಿಗೆಲ್ಲ ಜೇಷ್ಠಪುತ್ರನಾತ.
16 ಇರಲಿ ಇಹದಲಿ, ಇರಲಿ ಪರದಲಿ,
ಅಶರೀರ ಒಡೆಯರಾಗಲಿ, ಒಡೆತನವಾಗಲಿ,
ಅಧಿಕಾರಿಗಳಾಗಲಿ, ಆಧಿಪತ್ಯವಾಗಿರಲಿ,
ಆದುದೆಲ್ಲವೂ ಆತನಲಿ, ಆತನಿಂದ,
ಆತನಿಗಾಗಿ.
17 ಎಲ್ಲಕ್ಕೂ ಮೊದಲೇ ಇರುವನಾತ,
ಸಮಸ್ತಕ್ಕೂ ಆಧಾರಭೂತ.
18 ಸಭೆಯೆಂಬ ಶರೀರಕ್ಕೆ ಶಿರಸ್ಸಾತ,
ಆದಿಸಂಭೂತ, ಆಗಲೆಲ್ಲದರಲೂ ಅಗ್ರಸ್ಥ,
ಸತ್ತವರಿಂದ ಮೊದಲೆದ್ದು ಬಂದನಾತ.
19 ಆ ಸುತನಲ್ಲೇ ಇರಿಸಲು ನಿರ್ಧರಿಸಿದನು
ಪಿತದೇವ ತನ್ನ ಸರ್ವ ಸಂಪೂರ್ಣತೆಯನು.
20 ಶಿಲುಬೆಯಿಂದಾತ ಹರಿಸಿದ ರಕುತದಿಂದ
ಆಗುತಲಿದೆ ಶಾಂತಿಸಮಾಧಾನ,
ನಡೆದಿದೆ ದೇವರೊಡನೆ ಸಂಧಾನ,
ಇಹಪರಗಳೆಲ್ಲಕ್ಕೂ ಆತನ ಮುಖೇನ.

21 ಹಿಂದೆ, ನೀವು ಆಚಾರ-ವಿಚಾರಗಳಲ್ಲಿ ಕೆಟ್ಟವರಾಗಿದ್ದರಿಂದ ದೇವರ ವಿರೋಧಿಗಳಾಗಿದ್ದು ಅವರಿಂದ ದೂರವಿದ್ದಿರಿ. [22]ಈಗಲಾದರೋ ಯೇಸುಕ್ರಿಸ್ತರ ದೈಹಿಕ ಮರಣದ ಫಲವಾಗಿ ನಿಮಗೂ ದೇವರಿಗೂ ಸಂಧಾನ ನಡೆದಿದೆ. ಹೀಗೆ ದೇವರು ನಿಮ್ಮನ್ನು ತಮ್ಮ ಸನ್ನಿಧಿಗೆ ಸೇರಿಸಿಕೊಳ್ಳಲು ನೀವು ಪವಿತ್ರರೂ ನಿಷ್ಕಳಂಕರೂ ದೋಷರಹಿತರೂ ಆಗಿರುವಂತೆ ಮಾಡಿದ್ದಾರೆ. [23]ಇನ್ನು ನೀವು ವಿಶ್ವಾಸದಲ್ಲಿ ದೃಢವಾಗಿ ಮುನ್ನಡೆಯಬೇಕು. ಶುಭಸಂದೇಶವನ್ನು ಕೇಳಿದಾಗ ನೀವು ಹೊಂದಿದ ಭರವಸೆಯನ್ನು ಕಳೆದುಕೊಳ್ಳದಂತೆ ಜಾಗರೂಕರಾಗಿರಬೇಕು. ಪೌಲನಾದ ನಾನು ಇದೇ ಶುಭಸಂದೇಶದ ಪ್ರಚಾರಕ. ಈ ಶುಭಸಂದೇಶವನ್ನು ಜಗತ್ತಿನಲ್ಲಿರುವ ಸರ್ವಸೃಷ್ಟಿಗೂ ಸಾರಲಾಗುತ್ತಿದೆ.

### ನಿಗೂಢ ರಹಸ್ಯ

24 ಈಗ ನಿಮಗೋಸ್ಕರ ಸಂಕಟಪಡುವುದರಲ್ಲಿ ನನಗೆ ಸಂತೋಷವಿದೆ. ಕ್ರಿಸ್ತಯೇಸು ತಮ್ಮ ಶರೀರವಾದ ಧರ್ಮಸಭೆಗೋಸ್ಕರ ಅನುಭವಿಸಬೇಕಾದ ಯಾತನೆಗಳಲ್ಲಿ ಉಳಿದದ್ದನ್ನು ನಾನು ನನ್ನ ದೇಹದಲ್ಲಿ ಅನುಭವಿಸಿ ಪೂರ್ಣಗೊಳಿಸುತ್ತಿದ್ದೇನೆ. [25]ದೇವರು ನನ್ನನ್ನು ಧರ್ಮಸಭೆಯ ದಾಸನನ್ನಾಗಿ ನೇಮಿಸಿದ್ದಾರೆ. ನಿಮ್ಮ ಹಿತಕ್ಕಾಗಿ ಒಂದು ಮಹತ್ವದ ಕಾರ್ಯವನ್ನು ನನಗೆ ವಹಿಸಿರುತ್ತಾರೆ. [26]ಯುಗಯುಗಾಂತರಗಳಿಂದಲೂ ತಲತಲಾಂತರಗಳಿಂದಲೂ ನಿಗೂಢವಾಗಿದ್ದ ರಹಸ್ಯವನ್ನು, ಅಂದರೆ ತಮ್ಮ ವಾಕ್ಯವನ್ನು, ಈಗ ತಮ್ಮ ಜನರಿಗೆ ದೇವರು ಪ್ರಕಟಿಸಿದ್ದಾರೆ. [27]ಈ ರಹಸ್ಯ ಎಷ್ಟು ಶ್ರೀಮಂತವಾದುದು, ಎಷ್ಟು ಮಹಿಮಾನ್ವಿತವಾದುದು ಎಂಬುದನ್ನು ಎಲ್ಲಾ ಜನಾಂಗಗಳಿಗೂ ತಿಳಿಸಲು ದೇವರು ಇಚ್ಛಿಸಿದರು. ಕ್ರಿಸ್ತ ಯೇಸು ನಿಮ್ಮಲ್ಲಿದ್ದು ಮುಂದಿನ ಮಹಿಮೆಯ ನಿರೀಕ್ಷೆಗೆ ಆಧಾರವಾಗಿದ್ದಾರೆ ಎಂಬುದೇ ಈ ರಹಸ್ಯ. [28]ನಾವು ಸಾರುತ್ತಲಿರುವುದೂ ಯೇಸುಕ್ರಿಸ್ತರನ್ನೇ. ಎಲ್ಲರಿಗೂ ಬುದ್ಧಿ ಹೇಳುತ್ತಾ ಎಲ್ಲರಿಗೂ ಪೂರ್ಣಜ್ಞಾನವನ್ನು ಉಪದೇಶಿಸುತ್ತಾ ದೇವರ ಮುಂದೆ ಎಲ್ಲರನ್ನು ಕ್ರಿಸ್ತಯೇಸುವಿನಲ್ಲಿ ಪರಿಣತರನ್ನಾಗಿ ಊರ್ಜಿತಗೊಳಿಸಲು ಪ್ರಯತ್ನಿಸುತ್ತಿದ್ದೇವೆ. [29]ನನ್ನನ್ನು ಚೇತನಗೊಳಿಸುತ್ತಿರುವ ಯೇಸುಕ್ರಿಸ್ತರ ಶಕ್ತಿಯಿಂದ ಈ ಗುರಿಯನ್ನು ಸಾಧಿಸಲು ಶ್ರಮವಹಿಸಿ ಹೋರಾಡುತ್ತಿದ್ದೇನೆ.

### ಯೇಸುವಿನಲ್ಲಿ ಸ್ಥಿರವಿಶ್ವಾಸ

**2** ನಿಮಗಾಗಿಯೂ ಲವೊದಿಕೀಯದವರಿಗಾಗಿಯೂ ಹಾಗೂ ನನ್ನ ನೇರ ಪರಿಚಯ ಇಲ್ಲದವರಿಗಾಗಿಯೂ ನಾನು ಎಷ್ಟು ಶ್ರಮಿಸುತ್ತಿದ್ದೇನೆಂಬುದನ್ನು ತಿಳಿಸಬಯಸುತ್ತೇನೆ. [2]ಇದರಿಂದ ಅವರು ಅಂತರಂಗದಲ್ಲಿ ಉತ್ತೇಜನಗೊಂಡು ಪ್ರೀತಿಯಲ್ಲಿ ಒಂದಾಗಬೇಕು; ನೈಜ ಅರಿವಿನಿಂದ ಅವರಿಗೆ ಪೂರ್ಣಜ್ಞಾನ ಲಭಿಸಬೇಕು ಎಂಬುದೇ ನನ್ನ ಆಶಯ. ಆಗ ಅವರು ದೇವರ ರಹಸ್ಯವನ್ನು, ಅಂದರೆ ಕ್ರಿಸ್ತಯೇಸುವನ್ನು ಅರಿತುಕೊಳ್ಳಲು ಸಾಧ್ಯ. [3]ಕ್ರಿಸ್ತಯೇಸುವಿನಲ್ಲಿಯೇ ಜ್ಞಾನ, ವಿವೇಕ ಎಂಬ ಸಿರಿಸಂಪತ್ತು ಅಡಗಿದೆ. [4]ಯಾರೂ ತಮ್ಮ ಕುತರ್ಕಗಳಿಂದ ನಿಮ್ಮನ್ನು ಮೋಸಗೊಳಿಸದಿರಲಿ. [5]ನಾನು ಶಾರೀರಿಕವಾಗಿ ನಿಮ್ಮಿಂದ ದೂರವಿದ್ದರೂ ಆತ್ಮಿಕವಾಗಿ ನಿಮ್ಮೊಂದಿಗಿದ್ದೇನೆ. ನಿಮ್ಮ ಕ್ರಮಬದ್ಧ ನಡತೆಯನ್ನೂ ಕ್ರಿಸ್ತಯೇಸುವಿನಲ್ಲಿ ನಿಮಗಿರುವ ಸ್ಥಿರ ವಿಶ್ವಾಸವನ್ನೂ ನೋಡುವಾಗ ನನಗೆ ಅಮಿತಾನಂದವಾಗುತ್ತದೆ.

### ಯೇಸುಕ್ರಿಸ್ತರೇ ಬದುಕಿನ ಬುನಾದಿ

6 ನೀವು ಕ್ರಿಸ್ತಯೇಸುವನ್ನು ಪ್ರಭುವಾಗಿ ಸ್ವೀಕರಿಸಿರುವುದರಿಂದ, ಅವರೊಡನೆ ಐಕ್ಯತೆಯಿಂದ ಬಾಳಿರಿ. [7]ಅವರಲ್ಲಿ ಸ್ಥಿರವಾಗಿರಿ. ಅವರನ್ನೇ ಅವಲಂಬಿಸಿ ನಿಮ್ಮ ಬಾಳೆಂಬ ಸೌಧವನ್ನು ನಿರ್ಮಿಸಿರಿ. ನೀವು ಕಲಿತುಕೊಂಡಿರುವಂತೆ ನಿಮ್ಮ ವಿಶ್ವಾಸ ಅವರಲ್ಲಿ ದೃಢವಾಗಿರಲಿ. ಕೃತಜ್ಞತೆಯು ನಿಮ್ಮಲ್ಲಿ ಉಕ್ಕೇರಲಿ. [8]ಪ್ರಪಂಚದ ಪ್ರಬಲ ಶಕ್ತಿಗಳಿಂದಲೂ ಮಾನವ ವಿವೇಚನೆಯ ಶುಷ್ಕತರ್ಕ ಸಿದ್ಧಾಂತಗಳಿಂದಲೂ ಯಾರೂ ನಿಮ್ಮನ್ನು ಮೋಸಗೊಳಿಸಿ ವಶಪಡಿಸಿಕೊಳ್ಳದಂತೆ ಎಚ್ಚರಿಕೆಯಿಂದಿರಿ. ಇವುಗಳು ಪ್ರಾಪಂಚಿಕ ಪಾರಂಪರ್ಯಕ್ಕೆ

ಮತ್ತು ವಿಶ್ವದ ಮೂಲಭೂತ ಶಕ್ತಿಗಳಿಗೆ ಸಂಬಂಧಿಸಿದವುಗಳೇ ಹೊರತು ಯೇಸುಕ್ರಿಸ್ತರಿಗಲ್ಲ. [9]ದೈವತ್ವದ ಸಂಪೂರ್ಣತೆ ಸಶರೀರವಾಗಿ ಯೇಸುಕ್ರಿಸ್ತರಲ್ಲಿ ನೆಲೆಗೊಂಡಿದೆ. [10]ಸಕಲ ಆಧಿಪತ್ಯಕ್ಕೂ ಅಧಿಕಾರಕ್ಕೂ ಶಿರಸ್ಸು ಅವರೇ. ಅವರಲ್ಲಿ ಮಾತ್ರ ನೀವು ಪರಿಪೂರ್ಣತೆಯನ್ನು ಹೊಂದಲು ಸಾಧ್ಯ.

11 ಕ್ರಿಸ್ತಯೇಸುವಿನಲ್ಲಿಯೇ ನೀವು ಸುನ್ನತಿಯನ್ನು ಪಡೆದಿದ್ದೀರಿ. ಇದು ಶಾರೀರಿಕ ಸುನ್ನತಿಯಲ್ಲ, ಪಾಪಮಯ ಸ್ವಭಾವವನ್ನು ಕಿತ್ತೊಗೆಯುವ ಸುನ್ನತಿ. ಸ್ವಯಂ ಕ್ರಿಸ್ತಯೇಸುವೇ ಯೋಜಿಸಿದ ಸುನ್ನತಿ. [12]ದೀಕ್ಷಾಸ್ನಾನದಲ್ಲಿ ನೀವು ಅವರೊಂದಿಗೆ ಸಮಾಧಿಯಾದಿರಿ. ಕ್ರಿಸ್ತ ಯೇಸುವನ್ನು ಮೃತರ ಮಧ್ಯದಿಂದ ದೇವರು ತಾವೇ ಎಬ್ಬಿಸಿದರು. ಈ ದೇವರ ಶಕ್ತಿಯಲ್ಲಿ ನೀವು ವಿಶ್ವಾಸವಿಟ್ಟಿರುವುದರಿಂದ ದೀಕ್ಷಾಸ್ನಾನದಲ್ಲಿಯೇ ನಿಮ್ಮನ್ನು ಕ್ರಿಸ್ತಯೇಸುವಿನೊಂದಿಗೆ ಎಬ್ಬಿಸಲಾಯಿತು. [13]ನಿಮ್ಮ ಪಾಪಮಯ ಜೀವನದಿಂದಲೂ ಸುನ್ನತಿ ರಹಿತವಾದ ಸ್ವಭಾವದಿಂದಲೂ ಒಮ್ಮೆ ನೀವು ಮೃತರಾಗಿದ್ದಿರಿ. ಆದರೆ ಈಗ ದೇವರು ಕ್ರಿಸ್ತ ಯೇಸುವಿನೊಂದಿಗೆ ನಿಮ್ಮನ್ನು ಜೀವಂತಗೊಳಿಸಿದ್ದಾರೆ. [14]ಅವರು ನಮ್ಮ ಎಲ್ಲಾ ಪಾಪಗಳನ್ನು ಕ್ಷಮಿಸಿದ್ದಾರೆ. ನಮ್ಮನ್ನು ಬಂಧಿಸಿದ್ದ ಧರ್ಮಶಾಸ್ತ್ರದ ವಿಧಿ ನಿಯಮಗಳನ್ನು ಕ್ರಿಸ್ತಯೇಸು ತೊಡೆದುಹಾಕಿದ್ದಲ್ಲದೆ ಅವುಗಳನ್ನು ಶಿಲುಬೆಗೆ ಜಡಿದು ನಮ್ಮನ್ನು ಬಿಡುಗಡೆ ಮಾಡಿದ್ದಾರೆ. [15]ಬಲಾಢ್ಯ ಒಡೆಯರನ್ನೂ ಅಧಿಕಾರಿಗಳನ್ನೂ ನಿರಾಯುಧರನ್ನಾಗಿ ಮಾಡಿ, ತಾವು ಗಳಿಸಿದ ಜಯದ ನಿಮಿತ್ತ ಜನರೆಲ್ಲರ ಮುಂದೆ ಶಿಲುಬೆಯ ವಿಜಯೋತ್ಸವದಲ್ಲಿ ಅವರನ್ನು ಸೆರೆಯಾಳುಗಳನ್ನಾಗಿ ಪ್ರದರ್ಶಿಸಿದ್ದಾರೆ.

16 ಹೀಗಿರಲಾಗಿ, ತಿಂಡಿತೀರ್ಥದ ವಿಷಯದಲ್ಲಾಗಲಿ, ಹಬ್ಬಹುಣ್ಣಿಮೆಗಳ ವಿಚಾರದಲ್ಲಾಗಲಿ, ಸಬ್ಬತ್‌ದಿನವನ್ನು ಆಚರಿಸುವ ರೀತಿಯಲ್ಲಾಗಲಿ ನಿಮ್ಮನ್ನು ದೋಷಿಗಳೆಂದು ಯಾರೂ ದೂರದಿರಲಿ. [17]ಇವುಗಳೆಲ್ಲವೂ ಬರಲಿದ್ದುದರ ಛಾಯೆ ಮಾತ್ರ; ಕ್ರಿಸ್ತಯೇಸುವೇ ಅವುಗಳ ಸತ್ಯ ಸ್ವರೂಪ. [18]ನಿಮ್ಮಲ್ಲಿ ಕೆಲವರು ದೇವದೂತರ ಆರಾಧನೆಯಲ್ಲಿ ಆಸಕ್ತರಾಗಿದ್ದಾರೆ. ತಮಗೆ ದರ್ಶನಗಳಾದುವೆಂದು ಕೊಚ್ಚಿಕೊಳ್ಳುತ್ತಾರೆ. ಲೌಕಿಕ ಜ್ಞಾನದಿಂದ ನಿರರ್ಥಕವಾಗಿ ಉಬ್ಬಿಕೊಂಡಿದ್ದಾರೆ. ತಾವು ಬಹಳ ವಿನಯಶಾಲಿಗಳೆಂದು ಹೆಚ್ಚಳಪಡುತ್ತಾರೆ. ಇಂಥವರು ನಿಮ್ಮನ್ನು ಕಡೆಗಾಣಿಸದಂತೆ ಎಚ್ಚರದಿಂದಿರಿ. ಇವರು ಯೇಸುಕ್ರಿಸ್ತರೆಂಬ ಶಿರಸ್ಸಿನಿಂದ ಬೇರ್ಪಟ್ಟಿದ್ದಾರೆ. [19]ಈ ಶಿರಸ್ಸಿನಿಂದಲೇ ಇಡೀ ದೇಹವು, ಕೀಲು–ನರಗಳ ಮೂಲಕ ಒಂದಾಗಿ ಸೇರಿ, ಪೋಷಣೆ ಪಡೆದು, ದೇವರು ನಿಯೋಜಿಸಿರುವ ಪ್ರಕಾರ ಬೆಳೆಯುತ್ತಲಿದೆ.

### ನವಜೀವನ

20 ನೀವು ಕ್ರಿಸ್ತಯೇಸುವಿನೊಡನೆ ಮೃತರಾಗಿರುವ ಕಾರಣ, ಪ್ರಾಕೃತ ಶಕ್ತಿಗಳ ಬಂಧನದಿಂದ ಬಿಡುಗಡೆ ಹೊಂದಿದ್ದೀರಿ. ಹೀಗಿರುವಲ್ಲಿ, ಪ್ರಾಪಂಚಿಕ ವಿಧಿನಿಯಮಗಳಿಗೆ ಒಳಪಟ್ಟು ಬಾಳುತ್ತಿರುವುದೇಕೆ? [21]'ಇದನ್ನು ಮುಟ್ಟಬೇಡ,' 'ಅದನ್ನು ಸವಿಯಬೇಡ,' 'ಇನ್ನೊಂದನ್ನು ಬಳಸಬೇಡ', ಎಂಬ ಕಟ್ಟಳೆಗಳಿಗೇಕೆ ಒಳಗಾಗುತ್ತೀರಿ? [22]ಇವುಗಳೆಲ್ಲವೂ ಬಳಕೆಯಿಂದ ಅಳಿದು ಹೋಗುತ್ತವೆ. ಅಲ್ಲದೆ, ಅವೆಲ್ಲವೂ ಮಾನವ ವ್ಯವಸ್ಥಿತ ಬೋಧನೆ ಹಾಗೂ ನಿಬಂಧನೆಗಳು. [23]ಸ್ವಕಲ್ಪಿತ ಆಚಾರ ವಿಧಿಗಳಿಂದಲೂ ಕಪಟ ವಿನಯದಿಂದಲೂ ಕಠಿಣ ದೇಹದಂಡನೆಯಿಂದಲೂ ಕೂಡಿರುವ ಈ ವಿಧಿನಿಯಮಗಳು ಹೊರನೋಟಕ್ಕೆ ಜಾಣ್ಮೆಯುಳ್ಳದ್ದಾಗಿ ಕಾಣಬಹುದು. ಆದರೂ ಶಾರೀರಿಕ ಇಚ್ಛೆಗಳನ್ನು ನಿಯಂತ್ರಿಸಲು ಇವುಗಳು ಪ್ರಯೋಜನಕ್ಕೆ ಬರುವಂಥವುಗಳಲ್ಲ.

### ಕ್ರೈಸ್ತ ಜೀವನ

**3** ನೀವು ಯೇಸುಕ್ರಿಸ್ತರೊಂದಿಗೆ ಪುನರುತ್ಥಾನ ಹೊಂದಿರುವುದಾದರೆ ಸ್ವರ್ಗೀಯ ವಿಷಯಗಳ ಕಡೆಗೆ ಗಮನಕೊಡಿ. ಕ್ರಿಸ್ತಯೇಸು ಸ್ವರ್ಗದಲ್ಲಿ ದೇವರ ಬಲಗಡೆಯಲ್ಲಿ ಆಸೀನರಾಗಿದ್ದಾರೆ. [2–3]ನೀವು ಕ್ರಿಸ್ತಯೇಸುವಿನೊಂದಿಗೆ ಮರಣ ಹೊಂದಿರುವುದರಿಂದ ಅವರೊಂದಿಗೆ ನಿಮ್ಮ ಜೀವ ದೇವರಲ್ಲಿ ಮರೆಯಾಗಿದೆ. ನಿಮ್ಮ ಮನಸ್ಸು ಪ್ರಾಪಂಚಿಕ ವಿಷಯಗಳ ಮೇಲೆ ಅಲ್ಲ, ಸ್ವರ್ಗೀಯ ವಿಷಯಗಳ ಮೇಲೆ

ಕೇಂದ್ರೀಕೃತವಾಗಿರಲಿ. [4]ಕ್ರಿಸ್ತಯೇಸುವೇ ನಿಮ್ಮ ನೈಜ ಜೀವವಾಗಿದ್ದಾರೆ. ಅವರು ಪುನರಾಗಮಿಸುವಾಗ ನೀವೂ ಸಹ ಅವರ ಮಹಿಮೆಯಲ್ಲಿ ಪಾಲುಗಾರರಾಗಿ ಅವರೊಂದಿಗೆ ಪ್ರತ್ಯಕ್ಷರಾಗುವಿರಿ.

## ಸದ್ಗುಣಗಳೇ ಸ್ಥಿರಾಭರಣಗಳು

5 ನಿಮ್ಮಲ್ಲಿರುವ ಪ್ರಾಪಂಚಿಕ ಆಶೆ ಆಕಾಂಕ್ಷೆಗಳನ್ನು ತ್ಯಜಿಸಿರಿ. ಹಾದರ, ಅನೈತಿಕತೆ, ಕಾಮಾಭಿಲಾಷೆ, ದುರಾಲೋಚನೆ, ವಿಗ್ರಹಾರಾಧನೆಗೆ ಸಮವಾಗಿರುವ ಲೋಭ – ಇವುಗಳನ್ನು ದಮನಮಾಡಿರಿ. [6]ಇಂಥವುಗಳಿಗೆ ಈಡಾಗುವ ದುಷ್ಕರ್ಮಿಗಳು ದೇವರ ಕೋಪಾಗ್ನಿಗೆ ಗುರಿಯಾಗುತ್ತಾರೆ. [7]ಒಮ್ಮೆ ಇವೆಲ್ಲ ನಿಮ್ಮ ಜೀವನದ ರೀತಿನೀತಿಗಳಾಗಿದ್ದು ಇವುಗಳಲ್ಲೇ ಮಗ್ನರಾಗಿದ್ದಿರಿ.

8 ಈಗಲಾದರೋ ಕೋಪ, ರೋಷ, ಮತ್ಸರ – ಇವುಗಳನ್ನು ತ್ಯಜಿಸಿರಿ; ದೂಷಣೆ ಮತ್ತು ಹೊಲಸು ಮಾತುಗಳು ನಿಮ್ಮ ಬಾಯಿಂದ ಬರಕೂಡದು. [9]ಒಬ್ಬರಿಗೊಬ್ಬರು ಸುಳ್ಳುಹೇಳಬೇಡಿ. ಏಕೆಂದರೆ, ನಿಮ್ಮಲ್ಲಿದ್ದ ಹಳೆಯ ಸ್ವಭಾವವನ್ನೂ ಅದಕ್ಕೆ ಸಂಬಂಧಿಸಿದ ದುರಭ್ಯಾಸಗಳನ್ನೂ ತೊರೆದು ಬಿಟ್ಟಿದ್ದೀರಿ. [10]ಮಾತ್ರವಲ್ಲ, ನೂತನ ಸ್ವಭಾವವನ್ನು ಧರಿಸಿಕೊಂಡಿದ್ದೀರಿ. ನೀವು ಸೃಷ್ಟಿಕರ್ತನನ್ನು ಸಂಪೂರ್ಣವಾಗಿ ಅರಿತುಕೊಳ್ಳಬೇಕು ಎಂಬ ಉದ್ದೇಶದಿಂದ ಈ ಸ್ವಭಾವವನ್ನು ಅನುದಿನವೂ ನವೀಕರಿಸಲಾಗುತ್ತಿದೆ. [11]ಇಂಥ ಹೊಸ ಜೀವನದಲ್ಲಿ ಯೆಹೂದ್ಯ–ಗ್ರೀಕ, ಸುನ್ನತಿ ಹೊಂದಿದವ–ಸುನ್ನತಿ ಇಲ್ಲದವ, ನಾಗರಿಕ–ಅನಾಗರಿಕ, ಯಜಮಾನ–ಗುಲಾಮ ಎಂಬ ಭಿನ್ನಭೇದಗಳಿಲ್ಲ. ಕ್ರಿಸ್ತಯೇಸುವೇ ಸಮಸ್ತದಲ್ಲಿ ಸಮಸ್ತವೂ ಆಗಿದ್ದಾರೆ.

12 ನೀವು ದೇವರಿಂದ ಆಯ್ಕೆಯಾದವರು. ದೇವರಿಗೆ ಪ್ರಿಯವಾದವರು. ದೇವರ ಸ್ವಂತ ಜನರು. ಹೀಗಿರಲಾಗಿ ಕನಿಕರ, ದಯೆ, ದೀನತೆ, ವಿನಯಶೀಲತೆ, ಶಾಂತಿ, ಸಹನೆ ಎಂಬ ಸದ್ಗುಣಗಳೇ ನಿಮ್ಮ ಆಭರಣಗಳಾಗಿರಲಿ. [13]ಒಬ್ಬರನ್ನೊಬ್ಬರು ಸೈರಿಸಿಕೊಳ್ಳಿ. ಒಬ್ಬನ ಮೇಲೆ ತಪ್ಪು ಹೊರಿಸಲು ಕಾರಣವಿದ್ದರೂ ಕ್ಷಮಿಸಿಬಿಡಿ. ಪ್ರಭು ಯೇಸು ನಿಮ್ಮನ್ನು ಕ್ಷಮಿಸಿದಂತೆ ನೀವೂ ಇತರರನ್ನು ಕ್ಷಮಿಸಿರಿ. [14]ಎಲ್ಲಕ್ಕಿಂತ ಮಿಗಿಲಾಗಿ ನಿಮ್ಮಲ್ಲಿ ಪ್ರೀತಿಯಿರಲಿ. ಪ್ರೀತಿಯೇ ಸಮಸ್ತವನ್ನು ಸಂಪೂರ್ಣಗೊಳಿಸುವ ಬಂಧನ. [15]ನಿಮ್ಮ ಹೃನ್ಮನಗಳು ಕ್ರಿಸ್ತಯೇಸುವಿನ ಶಾಂತಿ ಸಮಾಧಾನದಿಂದ ತುಂಬಿರಲಿ. ನೀವು ಒಂದೇ ಶರೀರವಾಗಿ ಬಾಳಲು ಕರೆಯಲ್ಪಟ್ಟಿದ್ದೀರಿ; ಕೃತಜ್ಞತೆ ಉಳ್ಳವರಾಗಿ ಜೀವಿಸಿರಿ. [16]ಕ್ರಿಸ್ತಯೇಸುವಿನ ವಾಕ್ಯ ನಿಮ್ಮಲ್ಲಿ ನೆಲೆಸಿ ಸಮೃದ್ಧಿಯಾಗಿ ಬೆಳೆಯಲಿ. ಜ್ಞಾನಸಂಪನ್ನರಾಗಿ ಒಬ್ಬರಿಗೊಬ್ಬರು ಉಪದೇಶಮಾಡಿರಿ ಹಾಗೂ ಬುದ್ಧಿಹೇಳಿಕೊಳ್ಳಿರಿ. ಕೃತಜ್ಞತೆಯುಳ್ಳವರಾಗಿ ಕೀರ್ತನೆಗಳಿಂದಲೂ ಸಂಗೀತಗಳಿಂದಲೂ ಭಕ್ತಿಗೀತೆಗಳಿಂದಲೂ ಹೃದಯಾಂತರಾಳದಿಂದ ದೇವರಿಗೆ ಹಾಡಿರಿ. [17]ನುಡಿಯಲ್ಲಾಗಲೀ ನಡೆಯಲ್ಲಾಗಲೀ ನೀವು ಏನು ಮಾಡಿದರೂ ಯೇಸುಸ್ವಾಮಿಯ ಹೆಸರಿನಲ್ಲಿಯೇ ಮಾಡಿರಿ. ಅವರ ಮುಖಾಂತರವೇ ಪಿತನಾದ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಿರಿ.

## ಸಂಸಾರದಲ್ಲಿ ಸಾಮರಸ್ಯ

18 ಮಹಿಳೆಯರೇ, ನಿಮ್ಮ ನಿಮ್ಮ ಪತಿಯರಿಗೆ ಪ್ರಭು ಮೆಚ್ಚುವಂತೆ ತಗ್ಗಿ ನಡೆದುಕೊಳ್ಳಿರಿ. [19]ಪುರುಷರೇ, ನಿಮ್ಮ ನಿಮ್ಮ ಪತ್ನಿಯರನ್ನು ಪ್ರೀತಿಸಿರಿ. ಅವರೊಡನೆ ಕಠಿಣವಾಗಿ ವರ್ತಿಸದಿರಿ. [20]ಮಕ್ಕಳೇ, ಎಲ್ಲದರಲ್ಲೂ ನಿಮ್ಮ ತಂದೆತಾಯಿಗಳ ಮಾತು ಕೇಳಿರಿ. ಹೀಗೆ ಮಾಡಿದರೆ ಪ್ರಭುವಿಗೆ ಮೆಚ್ಚುಗೆಯಾಗುತ್ತದೆ. [21]ತಾಯಿತಂದೆಯರೇ, ನಿಮ್ಮ ಮಕ್ಕಳನ್ನು ಕೆರಳಿಸಿ ಮನಕುಗ್ಗಿಸದಿರಿ. [22]ದಾಸ್ಯದಲ್ಲಿರುವವರೇ, ಎಲ್ಲಾ ವಿಷಯಗಳಲ್ಲೂ ನಿಮ್ಮ ನಿಮ್ಮ ಧಣಿಗಳಿಗೆ ವಿಧೇಯರಾಗಿರಿ. ಧಣಿಗಳನ್ನು ಮೆಚ್ಚಿಸುವ ಸಲುವಾಗಿ ಮುಖದಾಕ್ಷಿಣ್ಯದ ಸೇವೆಮಾಡಬೇಡಿ. ಪ್ರಭುವಿಗೆ ಭಯಪಟ್ಟು ಪ್ರಾಮಾಣಿಕತೆಯಿಂದ ದುಡಿಯಿರಿ. [23]ನೀವು ಏನನ್ನು ಮಾಡಿದರೂ ಪೂರ್ಣ ಮನಸ್ಸಿನಿಂದ ಮಾಡಿ; ಮನುಷ್ಯರನ್ನು ಮೆಚ್ಚಿಸುವುದಕ್ಕಾಗಿ ಅಲ್ಲ, ಪ್ರಭುವನ್ನು ಮೆಚ್ಚಿಸುವುದಕ್ಕಾಗಿ ಮಾಡಿ. [24]ಅದಕ್ಕೆ ಪ್ರತಿಫಲವಾಗಿ ಪ್ರಭುವಿನಿಂದ ನೀವು ಸ್ವರ್ಗೀಯ ಬಾಧ್ಯತೆಯನ್ನು ಪಡೆಯುವಿರೆಂದು ನಿಮಗೆ ತಿಳಿದೇ ಇದೆ. [25]ಅನ್ಯಾಯ ಮಾಡುವವನು ತಾನು ಮಾಡಿದ ಅನ್ಯಾಯಕ್ಕೆ ತಕ್ಕ ಶಿಕ್ಷೆಯನ್ನು ಪಡೆಯುವನು. ದೇವರು ಪಕ್ಷಪಾತಿಯಲ್ಲ.

## ಪ್ರಾರ್ಥನಾ ಜೀವನ

**4** ಯಜಮಾನರೇ, ಸ್ವರ್ಗಲೋಕದಲ್ಲಿ ನಿಮಗೂ ಒಬ್ಬ ಒಡೆಯನಿದ್ದಾನೆಂಬುದನ್ನು ತಿಳಿದುಕೊಂಡು ನಿಮ್ಮ
ಮನೆಯಾಳುಗಳನ್ನು ನ್ಯಾಯಬದ್ಧ ರೀತಿಯಲ್ಲಿ ನೋಡಿಕೊಳ್ಳಿ. 2ಪ್ರಾರ್ಥನಾ ಜೀವನ ನಡೆಸಿರಿ.
ಪ್ರಾರ್ಥಿಸುವಾಗಲೆಲ್ಲಾ ಎಚ್ಚರವಾಗಿದ್ದು ಕೃತಜ್ಞತಾಸ್ತುತಿಯನ್ನು ಸಲ್ಲಿಸಿರಿ. 3-4ಕ್ರಿಸ್ತಯೇಸುವಿನ ರಹಸ್ಯವನ್ನು
ಪ್ರಚುರಪಡಿಸಲು ನಮಗೆ ಅವಕಾಶ ದೊರಕುವಂತೆ ಪ್ರಾರ್ಥಿಸಿರಿ. ಈ ಶುಭಸಂದೇಶದ ನಿಮಿತ್ತವೇ ನಾನು
ಸೆರೆಯಲ್ಲಿ ಇದ್ದೇನೆಂಬುದು ನಿಮಗೆ ತಿಳಿದಿದೆ. ನಾನು ಶುಭಸಂದೇಶವನ್ನು ಸ್ಪಷ್ಟವಾಗಿಯೂ ಸರಳವಾಗಿಯೂ
ಸಾರುವಂತೆ ಪ್ರಾರ್ಥಿಸಿರಿ. 5ನೆರೆಯವರ ವಿಷಯದಲ್ಲಿ ಜಾಣತನದಿಂದ ವರ್ತಿಸಿರಿ. ನಿಮಗಿರುವ ಸಮಯ
ಸಂದರ್ಭವನ್ನು ಸದುಪಯೋಗಪಡಿಸಿಕೊಳ್ಳಿರಿ. 6ನಿಮ್ಮ ಸಂಭಾಷಣೆ ಯಾವಾಗಲೂ ಹಿತಕರವಾಗಿದ್ದು
ಇತರರನ್ನು ಆಕರ್ಷಿಸುವಂತಿರಲಿ. ನೀವು ಯಾರು ಯಾರಿಗೆ, ಹೇಗೆ ಉತ್ತರಿಸಬೇಕು ಎಂಬುದನ್ನು
ಕಲಿತುಕೊಳ್ಳಿರಿ.

## ಸೆರೆಯಿಂದ ಶುಭಾಶಯ

7 ನಮ್ಮ ಪ್ರಿಯ ಸಹೋದರ ತುಖಿಕನು ನನ್ನ ವಿಷಯದಲ್ಲಿ ನಿಮಗೆ ಎಲ್ಲಾ ವರ್ತಮಾನವನ್ನು
ಕೊಡುವನು. ಆತನು ಪ್ರಾಮಾಣಿಕ ಸೇವಕನೂ ಪ್ರಭುವಿನ ಸೇವೆಯಲ್ಲಿ ನನ್ನ ಸಂಗಡಿಗನೂ ಆಗಿದ್ದಾನೆ. 8ನನ್ನ
ವಿಷಯದಲ್ಲಿ ನಿಮಗೆ ಎಲ್ಲವನ್ನೂ ತಿಳಿಸಿ, ನಿಮ್ಮನ್ನು ಹುರಿದುಂಬಿಸಿ, ಪ್ರೋತ್ಸಾಹಿಸುವುದಕ್ಕಾಗಿ ಆತನನ್ನು
ನಿಮ್ಮ ಬಳಿಗೆ ಕಳುಹಿಸಿದ್ದೇನೆ. 9ಆತನ ಜೊತೆಯಲ್ಲಿ ನಂಬಿಕಸ್ಥನಾದ ಪ್ರಿಯ ಸಹೋದರ ಒನೇಸಿಮನನ್ನು
ಕಳುಹಿಸುತ್ತಿದ್ದೇನೆ. ಇವನು ನಿಮ್ಮ ಊರಿನ ಸಭೆಗೆ ಸೇರಿದವನು. ಇಲ್ಲಿ ನಡೆಯುವುದನ್ನೆಲ್ಲಾ ಇವರು ನಿಮಗೆ
ತಿಳಿಸುವರು.

10 ನನ್ನೊಡನೆ ಸೆರೆಯಾಳಾಗಿರುವ ಅರಿಸ್ತಾರ್ಕನೂ ಬಾರ್ನಬನಿಗೆ ಹತ್ತಿರದ ನೆಂಟನಾದ
ಮಾರ್ಕನೂ ನಿಮಗೆ ಶುಭಾಶಯಗಳನ್ನು ಕಳುಹಿಸಿದ್ದಾರೆ. ಮಾರ್ಕನು ನಿಮ್ಮ ಬಳಿಗೆ ಬಂದಾಗ ಅವನನ್ನು
ಸ್ವಾಗತಿಸಿರಿ. ಅವನ ವಿಷಯದಲ್ಲಿ ನಿಮಗೆ ಸಲಹೆಗಳನ್ನು ಕೊಡಲಾಗಿದೆ. 11ಯಸ್ತನೆನಿಸಿಕೊಳ್ಳುವ ಯೇಸು
ಕೂಡ ನಿಮಗೆ ವಂದನೆಗಳನ್ನು ತಿಳಿಸಿದ್ದಾನೆ. ಕ್ರೈಸ್ತರಾದ ಯೆಹೂದ್ಯರಲ್ಲಿ ಇವರೇ ನನ್ನೊಡನೆ ದೇವರ
ಸಾಮ್ರಾಜ್ಯದ ಏಳಿಗೆಗಾಗಿ ದುಡಿಯುತ್ತಿರುವವರು. ಇವರಿಂದ ನನಗೆ ತುಂಬಾ ಆದರಣೆ ದೊರಕಿದೆ.

12 ಕ್ರಿಸ್ತಯೇಸುವಿನ ಸೇವಕನೂ ನಿಮ್ಮ ಸಭೆಗೆ ಸೇರಿದವನೂ ಆದ ಎಪಫ್ರನಿಂದಲೂ ನಿಮಗೆ
ವಂದನೆಗಳು. ನೀವು ಮಾಡುವ ಎಲ್ಲಾ ಕಾರ್ಯಗಳಲ್ಲೂ ದೇವರ ಚಿತ್ತಕ್ಕೆ ವಿಧೇಯರಾಗಿ ಸ್ಥಿರ ಹಾಗೂ ಸಿದ್ಧ
ಕ್ರೈಸ್ತರಾಗಿ ಬಾಳಬೇಕೆಂದು ಅವನು ನಿಮಗಾಗಿ ಸದಾ ಆಸಕ್ತಿಯಿಂದ ಪ್ರಾರ್ಥಿಸುತ್ತಿದ್ದಾನೆ. 13ನಿಮಗಾಗಿಯೂ
ಲವೊದಿಕೀಯ ಹಾಗೂ ಹಿರೆಯಾಪೊಲಿಯದ ಜನರಿಗಾಗಿಯೂ ಆತನು ಶ್ರಮವಹಿಸಿ
ದುಡಿಯುತ್ತಿದ್ದಾನೆಂಬುದಕ್ಕೆ ನಾನೇ ಸಾಕ್ಷಿ. 14ನಮ್ಮ ಪ್ರಿಯ ವೈದ್ಯನಾದ ಲೂಕನೂ ದೇಮಾಸನೂ ನಿಮಗೆ
ವಂದನೆಗಳನ್ನು ತಿಳಿಸಿದ್ದಾರೆ.

15 ಲವೊದಿಕೀಯದಲ್ಲಿರುವ ನಮ್ಮ ಸಹೋದರರು, ನಿಂಫಳು ಮತ್ತು ಆಕೆಯ ಮನೆಯಲ್ಲಿ ಸೇರುವ
ಸಭೆಯವರು ಇವರೆಲ್ಲರಿಗೂ ನಮ್ಮ ಅಭಿನಂದನೆಗಳು. 16ಈ ಪತ್ರವನ್ನು ನೀವು ಓದಿದ ಬಳಿಕ
ಲವೊದಿಕೀಯದ ಸಭೆಯವರಿಗೆ ಓದಿ ಹೇಳುವ ವ್ಯವಸ್ಥೆಮಾಡಿರಿ. ಅಂತೆಯೇ, ಲವೊದಿಕೀಯದಿಂದ
ಕಳಿಸಲಾಗುವ ಪತ್ರವನ್ನು ತರಿಸಿಕೊಂಡು ಓದಿರಿ. 17ತನಗೆ ಒಪ್ಪಿಸಿದ ಕೆಲಸವನ್ನು ಜವಾಬ್ದಾರಿಯಿಂದ
ನಿರ್ವಹಿಸಬೇಕೆಂಬುದಾಗಿ ಅರ್ಖಿಪ್ಪನಿಗೆ ತಿಳಿಸಿರಿ.

18 ಇದನ್ನು ಪೌಲನಾದ ನಾನೇ ಸ್ವತಃ ಬರೆಯುತ್ತಿದ್ದೇನೆ. ನಾನು ಸೆರೆಯಲ್ಲಿದ್ದೇನೆ ಎಂಬುದು ನಿಮಗೆ
ನೆನಪಿರಲಿ. ಶುಭಾಶಯಗಳು !

ದೈವಾನುಗ್ರಹ ನಿಮ್ಮಲ್ಲಿರಲಿ !